## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಎಸ್.ಎಂ. ಗಡಾದ್, ಜಂಟಿ ಕೃಷಿ ನಿರ್ದೇಶಕರು ಹಾಗೂ ಹಿಂದಿನ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕಾಂಪೋಸ್ಟ್ ಅಭಿವೃದ್ಧಿ ನಿಗಮ, ಬೆಂಗಳೂರು, ಇವರ ವಿರುದ್ಧದ ಶಿಸ್ತು ಕ್ರಮ ಕುರಿತು.

ಓದಲಾಗಿದೆ.

1) **ಸರ್ಕಾರದ ಕಾರಣ ಕೇಳುವ ಪತ್ರ ಸಂಖ್ಯೆ:ಕೃಇ 39 ಕೃಪವಿ 2010, ದಿನಾಂಕ:29-08-2012.**
2) **ಶ್ರೀ ಎಸ್.ಎಂ. ಗಡಾದ, ಜಂಟಿ ಕೃಷಿ ನಿರ್ದೇಶಕರು, ಇವರ ಲಿಖಿತ ಹೇಳಿಕೆ ದಿನಾಂಕ:22-12-2012.**
3) **ಆಯುಕ್ತರು, ಕೃಷಿ ಇಲಾಖೆರವರ ಪತ್ರ ಸಂಖ್ಯೆ:ಸಿಬ್ಬಂದಿ-1/ವಿಚಾರಣೆ-1/16/2010-11, ದಿನಾಂಕ:22-08-2013.**

ಪ್ರಸ್ತಾವನೆ:-

ಶ್ರೀ ಎಸ್.ಎಂ. ಗಡಾದ್, ಜಂಟಿ ಕೃಷಿ ನಿರ್ದೇಶಕರು, ಇವರು ಈ ಹಿಂದೆ ಕರ್ನಾಟಕ ಕಾಂಪೋಸ್ಟ್ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು, ಇಲ್ಲಿನ ವ್ಯವಸ್ಥಾಪಕ ನಿರ್ದೇಶಕರಾಗಿ ಕಾರ್ಯನಿರ್ವಹಿಸುತ್ತಿದ್ದಾಗ, ಸದರಿ ಸಂಸ್ಥೆಯಲ್ಲಿನ ಕಛೇರಿ ಸಿಬ್ಬಂದಿಗಳಿಗೆ ಸರಿಯಾದ ಮಾರ್ಗದರ್ಶನವನ್ನು ನೀಡದೇ ಹಿಂದೆ ಕಾರ್ಯನಿರ್ವಹಿಸಿದ ಅಧಿಕಾರಿಗಳ ತಪ್ಪನ್ನೇ ಪ್ರಸ್ತಾಪಿಸುತ್ತಾ ಕಾಲಹರಣ ಮಾಡಿರುತ್ತಾರೆಂದು, ಅಲ್ಲದೇ ಸದರಿ ಕಂಪನಿಯಲ್ಲಿ ಕಾರ್ಯನಿರ್ವಹಿಸಿದ ಅವಧಿ ಸೆಪ್ಟೆಂಬರ್ 2009ರಿಂದ ನವೆಂಬರ್ 2009ರವರಗಿನ ಅವಧಿಯಲ್ಲಿ ಕಂಪನಿಯ ಆದಾಯ ಕುಂಠಿತವಾಗಲು ಕಾರಣರಾಗಿರುತ್ತಾರೆಂಬ ಆಪಾದನೆಗೆ ಸಂಬಂಧಿಸಿದಂತೆ ಅವರಿಗೆ ಮೇಲೆ ಕ್ರಮಾಂಕ (1)ರಲ್ಲಿ ಓದಲಾದ ದಿನಾಂಕ:29-08-2012ರಂದು ಕರ್ನಾಟಕ ನಾಗರೀಕ ಸೇವಾ (ಸಿಸಿಎ) ನಿಯಮಾವಳಿ ನಿಯಮ 11ರಡಿಯಲ್ಲಿ ಕಾರಣ ಕೇಳುವ ಪತ್ರವನ್ನು ಜಾರಿ ಮಾಡಲಾಗಿತ್ತು.

ಕ್ರಮಾಂಕ(2)ರಲ್ಲಿ ಓದಲಾದ ಪತ್ರದಲ್ಲಿ ಶ್ರೀ ಎಸ್.ಎಂ. ಗಡಾದ್, ಜಂಟಿ ಕೃಷಿ ನಿರ್ದೇಶಕರು, ಇವರು ತಮಗೆ ಜಾರಿ ಮಾಡಿದ ಕಾರಣ ಕೇಳುವ ಪತ್ರಕ್ಕೆ ಲಿಖಿತ ಹೇಳಿಕೆಯನ್ನು ಸಲ್ಲಿಸಿ, ತಮ್ಮ ಮೇಲಿನ ಆಪಾದನೆಗಳನ್ನು ಸಮರ್ಥಿಸಲು ಅಗತ್ಯವಾದ ದಾಖಲೆಗಳನ್ನು ಕೋರಿರುವುದೇ ಅಲ್ಲದೇ ತಾವು ಸದರಿ ಕಂಪನಿಯಲ್ಲಿ ವ್ಯವಸ್ಥಾಪಕ ನಿರ್ದೇಶಕರಾಗಿ ಕೇವಲ ಎರಡೂವರೆ ತಿಂಗಳು ಮಾತ್ರ ಕಾರ್ಯನಿರ್ವಹಿಸಿರುವುದಾಗಿ ತಿಳಿಸಿರುತ್ತಾರೆ. ಆದರೆ ತಮಗೆ ನೀಡಿರುವ ಆರೋಪ ಪಟ್ಟಿಯಲ್ಲಿ ಒಂದು ವರ್ಷದ ಮಾರಾಟದ ಬಗ್ಗೆ ನಮೂದಿಸಿ, ಉಳಿದ ವರ್ಷಗಳ ಆದಾಯದ ಬಗ್ಗೆ ನಮೂದಿಸದೇ ಇರುವುದರಿಂದ ತಮ್ಮ ಮೇಲೆ ಹೊರಿಸಿರುವ ಆರೋಪವು ಅನುಮಾನಾಸ್ಪದವಾಗಿದೆ. ಅಲ್ಲಿನ ಕಾರ್ಮಿಕರ ಸಮಸ್ಯೆಗಳ ಬಗ್ಗೆ ಮತ್ತು ನಿಯಮ ಬಾಹಿರ ವ್ಯವಹಾರದ ಬಗ್ಗೆ ಬೋರ್ಡಿನ ಗಮನಕ್ಕೆ ತಂದಿರುವುದಾಗಿ ವರದಿ ಮಾಡಿರುತ್ತಾರೆ. ಅಲ್ಲದೇ ಉತ್ಪಾದನೆಗೆ ಸಂಬಂಧಿಸಿದಂತೆ ಎಲ್ಲಾ ಅಧಿಕಾರವನ್ನು ಉಪ ವ್ಯವಸ್ಥಾಪಕರೇ ನಿರ್ವಹಿಸುತ್ತಿದ್ದು ಅವರೇ ನೇರವಾಗಿ ಅಧ್ಯಕ್ಷರೊಂದಿಗೆ ವ್ಯವಹರಿಸುತ್ತಿದ್ದು, ಯಾವ ಅಧಿಕೃತ ದಾಖಲೆಗಳಿಗೂ ವ್ಯವಸ್ಥಾಪಕ ನಿರ್ದೇಶಕರ ಸಹಿ ಇರುವುದಿಲ್ಲವೆಂದು ಹೇಳಿಕೆ ನೀಡಿ ತಾವು ದೃಢೀಕರಿಸಿದ ಮಾರಾಟ ಮಾಡಿದ ದೃಢೀಕರಣ ಪತ್ರವನ್ನು ಒದಗಿಸುವಂತೆ ಕೋರಿರುತ್ತಾರೆ.

ವ್ಯವಸ್ಥಾಪಕ ನಿರ್ದೇಶಕರ ಸದರಿ ಕೋರಿಕೆಗನುಗುಣವಾಗಿ ದಾಖಲೆಗಳನ್ನು ಅವರಿಗೆ ಒದಗಿಸುವಂತ ಮತ್ತು ಅವರು ತಮ್ಮ ಹೇಳಿಕೆಯಲ್ಲಿ ಪ್ರಸ್ತಾವಿಸಿರುವ ಅಂಶಗಳ ಬಗ್ಗೆ ಈ ಪ್ರಕರಣವು ವಿಚಾರಣೆಗೆ ಯೋಗ್ಯವೇ ಎಂಬುದರ ಬಗ್ಗೆ ಪರಿಶೀಲಿಸಿ, ವರದಿ ನೀಡುವಂತೆ ಕೃಷಿ ಆಯುಕ್ತರನ್ನು ಕೋರಲಾಗಿದ್ದು, ಅದಕ್ಕೆ ಉತ್ತರವಾಗಿ ಕೃಷಿ ಆಯುಕ್ತರು, ದಿನಾಂಕ:22-08-2013ರಂದು ಸರ್ಕಾರಕ್ಕೆ ಪತ್ರವೊಂದನ್ನು ಬರೆದು ವರದಿಯನ್ನು ನೀಡಿ, ಶ್ರೀ ಎಸ್.ಎಂ. ಗಡಾದ್, ಇವರು ಕರ್ನಾಟಕ ಕಾಂಪೋಸ್ಟ್ ಅಭಿವೃದ್ಧಿ ನಿಗಮ ನಿಯಮಿತದಲ್ಲಿ ಕೇವಲ ಎರಡೂವರೆ ತಿಂಗಳು ಮಾತ್ರ ಸೇವೆ ಸಲ್ಲಿಸಿರುವುದರಿಂದ ಈ ಅಲ್ಪ ಅವಧಿಯಲ್ಲಿ ಯಾವುದೇ ಅಧಿಕಾರಿಗೆ ಗಣನೀಯ ಪ್ರಗತಿ ಸಾಧಿಸುವುದು ಅಸಾಧ್ಯದ ವಿಷಯ. ಆದ್ದರಿಂದ ಅವರ ವಿರುದ್ಧದ ಆರೋಪಗಳಲ್ಲಿ ನಿಖರತೆ ಮತ್ತು ಸ್ಪಷ್ಟತೆಯ ಕೊರತೆ ಕಂಡುಬರುತ್ತದೆ. ಆದ್ದರಿಂದ ಸದರಿ ಆರೋಪಗಳು ಸಮಂಜಸವಾಗಿರುವುದಿಲ್ಲ ಎಂಬ ಅಭಿಪ್ರಾಯವನ್ನು ನೀಡಿರುತ್ತಾರೆ.

ಕೃಷಿ ಆಯುಕ್ತರ ಮೇಲ್ಕಂಡ ವರದಿಯನ್ನು ಪರಿಶೀಲಿಸಿದ್ದು, ಶ್ರೀ ಎಸ್.ಎಂ. ಗಡಾದ್, ಜಂಟಿ ಕೃಷಿ ನಿರ್ದೇಶಕರು, ಧಾರವಾಡ, ಇವರನ್ನು ಅವರ ಮೇಲಿನ ಆರೋಪಗಳಿಂದ ಕೈಬಿಟ್ಟು, ಪ್ರಕರಣವನ್ನು ಮುಕ್ತಾಯ ಮಾಡಲು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಕೃತೋಇ 39 ಕೃಪವಿ 2010, ಬೆಂಗಳೂರು, ದಿನಾಂಕ:22-10-2013.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಶ್ರೀ ಎಸ್.ಎಂ. ಗಡಾದ್, ಜಂಟಿ ಕೃಷಿ ನಿರ್ದೇಶಕರು, ಧಾರವಾಡ ಹಾಗೂ ಹಿಂದಿನ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕಾಂಪೋಸ್ಟ್ ಅಭಿವೃದ್ಧಿ ನಿಗಮ, ಇವರನ್ನು ಅವರ ಮೇಲಿನ ಆರೋಪಗಳನ್ನು ಕೈಬಿಟ್ಟು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

Manjnathpal 22/10

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ,

ಇವರಿಗೆ:-

1) ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ಲೆಕ್ಕ ತಪಾಸಣೆ-05), ಕರ್ನಾಟಕ ಬೆಂಗಳೂರು.
2) ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
3) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಕಾಂಪೋಸ್ಟ್ ಅಭಿವೃದ್ಧಿ ನಿಗಮ, ಬೆಂಗಳೂರು.
4) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ, ಬೆಂಗಳೂರು.
5) ಸರ್ಕಾರದ ಉಪ ಕಾರ್ಯದರ್ಶಿ, ಕೃಷಿ ಇಲಾಖೆ ಇವರ ಆಪ್ತ ಸಹಾಯಕರಿಗೆ.
6) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.